ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಬುಧವಾರ, ದಿನಾಂಕ: 17ನೇ ಜುಲೈ, 2019

ಬಾಲ ಮತ್ತು ಹದಿಹರೆಯದವರ ಕಾರ್ಮಿಕ ನಿಷೇಧ ಕಾಯ್ದೆಯಲ್ಲಿ ಕೃಷಿ ಕ್ಷೇತ್ರವನ್ನು ಅಪಾಯಕಾರಿ ಕ್ಷೇತ್ರವೆಂದು ಪರಿಗಣಿಸದಿರುವ ಬಗ್ಗೆ

ಶ್ರೀಕವಟಗಿಮಠಮಹಾಂತೇಶಮಲ್ಲಿಕಾರ್ಜುನ(ಸ್ಥಳೀಯಸಂಸ್ಥೆಗಳಕ್ಷೇತ್ರ):-

219 (180) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಎಷ್ಟು ಮಕ್ಕಳು ಕೃಷಿ ಕ್ಷೇತ್ರದಲ್ಲಿ ಮತ್ತು ಅದಕ್ಕೆ ಸಂಬಂಧಪಟ್ಟ ಕ್ಷೇತ್ರಗಳಾದ ಬೀಜ ಸಂಸ್ಕರಣೆ, ಹೂ ಸಂಸ್ಕರಣೆ ಕ್ಷೇತ್ರಗಳಲ್ಲಿ ದುಡಿಯುತ್ತಿದ್ದಾರೆ ;

(ಆ) ಈ ಕ್ಷೇತ್ರಗಳಲ್ಲಿ ಬಳಸುವ ಕ್ರಿಮಿನಾಶಕ ಮತ್ತು ಕೀಟಾನಾಶಕ ಔಷಧಗಳು ಮಕ್ಕಳ ಆರೋಗ್ಯದ ಮೇಲೆ ಪರಿಣಾಮ ಬೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಕೃಷಿ ಸಂಬಂಧಿತವಾದ ಕೋಳಿಸಾಕಾಣಿಕೆ, ಹಂದಿ ಸಾಕಾಣಿಕೆ, ಕುರಿ ಸಾಕಾಣಿಕೆ ಮೊದಲಾದವುಗಳಲ್ಲಿರುವ ಮಕ್ಕಳನ್ನು ದುಡಿಮೆಯಿಂದ ಬಿಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಈ) ಹಾಗಿದ್ದಲ್ಲಿ, ಈ ಮಕ್ಕಳ ಹಿತವನ್ನು ರಕ್ಷಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?